ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ತೆರೆದ ವಿದ್ಯುತ್ ತಂತಿಗಳಿಂದ ಅವಘಡ ಸಂಭವಿಸಿರುವ ಬಗ್ಗೆ

ಶ್ರೀಲಹರ್‌ಸಿಂಗ್‌ಸಿರೋಯಾ(ವಿಧಾನಸಭೆಯಿಂದಚುನಾಯಿತರಾದವರು):-

812 (651) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 03 ವರ್ಷಗಳಲ್ಲಿ ರಾಜ್ಯದಲ್ಲಿ ತೆರೆದ ವಿದ್ಯುತ್ ತಂತಿಗಳಿಂದ/ಇನ್ನಿತರೆ ವಿದ್ಯುತ್ ಅವಘಡಗಳಿಂದ ಮೃತಪಟ್ಟವರ ಸಂಖ್ಯೆ ಎಷ್ಟು;

(ಆ) ಇಂತಹ ವಿದ್ಯುತ್ ಅವಘಡಗಳನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕಳೆದ 03 ವರ್ಷಗಳಲ್ಲಿ ವಿದ್ಯುತ್ ಅವಘಡದಲ್ಲಿ ಮೃತಪಟ್ಟವರ /ಗಾಯಗೊಂಡವರಿಗೆ ನೀಡಲಾಗಿರುವ ಪರಿಹಾರದ ವಿವರಗಳನ್ನು ಒದಗಿಸುವುದು ;

(ಈ) ರಾಜ್ಯ ಸರ್ಕಾರ ವಿದ್ಯುತ್ ತಂತಿಗಳನ್ನು ನೆಲದೊಳಗೆ ಅಳವಡಿಸುವ ಯೋಜನೆ ಹಮ್ಮಿಕೊಳ್ಳುತ್ತಿದೆಯೇ, ಹಾಗಿದ್ದಲ್ಲಿ, ವಿವರವನ್ನು ಒದಗಿಸುವುದು ?